# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 25 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |
| ಉತ್ತರಿಸುವ ದಿನಾಂಕ | : | 13.02.2024 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಡಿಕೆ ತೋಟಗಳಿಗೆ ಹಬ್ಬಿರುವ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಅಡಿಕೆ ಬೆಳೆಗಾರರು ಆರ್ಥಿಕವಾಗಿ ಅತೀವ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಬಂದಿದ್ದಲ್ಲಿ ಸದರಿ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಎಷ್ಟು ವಿಸ್ತೀರ್ಣದ ಅಡಿಕೆ ತೋಟ ಇದುವರೆವಿಗೆ ಹಾನಿಗೀಡಾಗಿದೆ: ಆರ್ಥಿಕ ನಷ್ಟದ ಅಂದಾಜಿನ ವಿವರಗಳೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು. | ಅಡಿಕೆ ಎಲೆ ಚುಕ್ಕೆ ರೋಗದಿಂದ ಒಟ್ಟು 53,977 ಹೆಕ್ಟೇರ್ ಪ್ರದೇಶವು ಹಾನೀಡಾಗಿದೆ ಮತ್ತು ಅಂದಾಜು ಆರ್ಥಿಕ ನಷ್ಟ ಒಟ್ಟು ರೂ. 110181.13 ಲಕ್ಷಗಳು. ಜಿಲ್ಲಾವಾರು ವಿವರ ಈ ಕೆಳಗಿನಂತಿದೆ. |

| ಜಿಲ್ಲೆ | ಹಾನಿಗೀಡಾದ ಪ್ರದೇಶ (ಹೆಕ್ಟೇರ್‌ಗಳಲ್ಲಿ) | ಅಂದಾಜು ಆರ್ಥಿಕ ನಷ್ಟದ ವಿವರ (ರೂ. ಲಕ್ಷಗಳಲ್ಲಿ) |
|---|---|---|
| ಚಿಕ್ಕಮಗಳೂರು | 28,788 | 64128.37 |
| ಶಿವಮೊಗ್ಗ | 11,950 | 25901.00 |
| ಉತ್ತರ ಕನ್ನಡ | 8,604 | 17486.88 |
| ದಕ್ಷಿಣ ಕನ್ನಡ | 3,623 | 2205.00 |
| ಹಾಸನ | 360 | - |
| ಉಡುಪಿ | 123 | 123.00 |
| ಕೊಡಗು | 529 | 336.88 |
| ಒಟ್ಟು | 53,977 | 110181.13 |

ಅಡಿಕೆ ಹಳದಿ ಎಲೆ ರೋಗದಿಂದ ಒಟ್ಟು 13,767 ಹೆಕ್ಟೇರ್ ಪ್ರದೇಶ ಹಾನೀಡಾಗಿದೆ ಮತ್ತು ಅಂದಾಜು ಆರ್ಥಿಕ ನಷ್ಟ ಒಟ್ಟು ರೂ. 56233.25 ಲಕ್ಷಗಳು. ಜಿಲ್ಲಾವಾರು ವಿವರ ಕೆಳಗಿನಂತಿದೆ.

| ಜಿಲ್ಲೆ | ಹಾನಿಗೀಡಾದ ಪ್ರದೇಶ (ಹೆಕ್ಟೇರ್‌ಗಳಲ್ಲಿ) | ಅಂದಾಜು ಆರ್ಥಿಕ ನಷ್ಟದ ವಿವರ (ರೂ. ಲಕ್ಷಗಳಲ್ಲಿ) |
|---|---|---|
| ಚಿಕ್ಕಮಗಳೂರು | 9625 | 50531.25 |
| ದಕ್ಷಿಣ ಕನ್ನಡ | 2000 | 4352.00 |
| ಕೊಡಗು | 2142 | 1350.00 |
| ಒಟ್ಟು | 13767 | 56233.25 |

| | | |
|---|---|---|
| ಇ) | ಸದರಿ ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯನ್ನು ವೈಜ್ಞಾನಿಕವಾಗಿ ನಿಯಂತ್ರಿಸಲು ಮತ್ತು ಹಾನಿಗೀಡಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಅಡಿಕೆ ಎಲೆ ಚುಕ್ಕೆ ಹಾಗೂ ಹಳದಿ ಎಲೆ ರೋಗದ ಬಾಧೆಯನ್ನು ವೈಜ್ಞಾನಿಕವಾಗಿ ನಿಯಂತ್ರಿಸಲು ಹಾಗೂ ಹಾನಿಗೀಡಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಇಲಾಖಾ ವತಿಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ.<br>**ಎಲೆಚುಕ್ಕೆ ರೋಗ:**<br>1. ಅಡಿಕೆ ಬೆಳೆಗಾರರಿಗೆ ಎಲೆ ಚುಕ್ಕೆ ರೋಗದ ನಿಯಂತ್ರಣೆಗಾಗಿ ಪ್ರತಿ ಫಲಾನುಭವಿಗೆ ಪ್ರತಿ ಹೆಕ್ಟೇರ್ ಗೆ ರೂ.4000.00 ಗಳಂತೆ 1.5 ಹೆಕ್ಟೇರ್ ವರೆಗೆ ರೂ.6000/- ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ನೀಡಲಾಗುತ್ತಿದೆ. ಈ ಕಾರ್ಯಕ್ರಮದಡಿ 2023-24ನೇ ಸಾಲಿನಲ್ಲಿ 6250 ಹೆಕ್ಟೇರ್ ಪ್ರದೇಶಕ್ಕೆ ರೂ. 250.00ಲಕ್ಷ ವಿನಿಯೋಗಿಸಿ ಸಸ್ಯ ಸಂರಕ್ಷಣಾ ಔಷಧಿಗಳನ್ನು ಉಚಿತವಾಗಿ ನೀಡಲಾಗಿರುತ್ತದೆ.<br>2. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣೆ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಗೆ ಪ್ರಸಕ್ತ ಸಾಲಿನಲ್ಲಿ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಸಂಶೋಧನೆಯು ಪ್ರಗತಿಯಲ್ಲಿರುತ್ತದೆ.<br>3. ಅಡಿಕೆ ಬೆಳೆಗಾರರಿಗೆ ಅಡಿಕೆ ಬೆಳೆಯ ಕಟಾವು ಹಾಗೂ ಸಿಂಪರಣೆಗಾಗಿ(ದೋಟಿ) ಖರೀದಿಸಲು ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ 1265 ಫಲಾನುಭವಿಗಳಿಗೆ ಈವರೆಗೂ ರೂ.396.17 ಲಕ್ಷಗಳ ಸಹಾಯಧನ ನೀಡಲಾಗಿದೆ.<br>4. ಪ್ರಮುಖ ಅಡಿಕೆ ಬೆಳೆಯುವ ಜಿಲ್ಲೆಗಳಲ್ಲಿ ಒಟ್ಟು 53977 ಹೆಕ್ಟೇರ್ ಪ್ರದೇಶದಲ್ಲಿ ಎಲೆ ಚುಕ್ಕೆ ರೋಗದ ನಿಯಂತ್ರಣೆಗೆ ರೂ. 21.50 ಕೋಟಿಗಳ ಅನುದಾನದ ಅವಶ್ಯಕತೆಯಿದ್ದು, ಈ ಸಂಬಂದಿತ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br>5. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣೆಗೆ ಅಗತ್ಯವಿರುವ ಸಸ್ಯ ಸಂರಕ್ಷಣಾ ಔಷಧಿಗಳು ಹಾಗೂ ಸಿಂಪರಣೆ ವೆಚ್ಚ, ತೋಟಗಳ ನೈರ್ಮಲೀಕರಣ ಹಾಗೂ ಪೋಷಕಾಂಶಗಳ ನಿರ್ವಹಣೆ ಕುರಿತಾದ ಅರಿವು ಮೂಡಿಸುವ ಕಾರ್ಯಕ್ರಮಗಳು, ಉತ್ತಮ ತೋಟಗಾರಿಕೆ ಬೇಸಾಯ ಪದ್ಧತಿಗಳ ಅಳವಡಿಕೆ, ಪ್ರಾತ್ಯಕ್ಷತೆಗಳು ಇತ್ಯಾದಿಗಳಿಗಾಗಿ ರೂ. 225.73 ಕೋಟಿಗಳ ಪ್ರಸ್ತಾವನೆಯನ್ನು ರೂಪಿಸಿ ಕೇಂದ್ರ ಸಂಸ್ಥೆಯಾದ |

| | | |
|---|---|---|
| | | CPCRI ಕಾಸರಗೋಡು ರವರ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಈ ಪ್ರಸ್ತಾವನೆಯ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲುದಾರಿಕೆ ಮತ್ತು ವರ್ಷವಾರು ಅನುದಾನದ ಹಂಚಿಕೆ ಕುರಿತು ಕೇಂದ್ರ ಸರ್ಕಾರವು ಮಾಹಿತಿಯನ್ನು ಕೋರಿದ್ದು, ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br>6. ರೋಗದ ನಿಯಂತ್ರಣೆಯ ಕುರಿತು ರಾಷ್ಟ್ರೀಯ ವಿಜ್ಞಾನಿಕ ಸಮಿತಿ ಹಾಗೂ ಇಲಾಖಾ ಅಧಿಕಾರಿಗಳು ಅಡಿಕೆ ಎಲೆಚುಕ್ಕೆ ರೋಗ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಹಾರೋಪಾಯಗಳನ್ನು ಹಾಗೂ ಪ್ರಾತ್ಯಕ್ಷತೆಗಳನ್ನು ಕೈಗೊಳ್ಳಲಾಗಿರುತ್ತದೆ.<br><br>**ಅಡಿಕೆ ಹಳದಿ ಎಲೆ ರೋಗ:**<br>1. ಪರ್ಯಾಯ ಬೆಳೆಗಳನ್ನು ಬೆಳೆಸಲು: ತೋಟಗಾರಿಕೆ ಇಲಾಖೆಯ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿ ಕಾಯಿ, ಬೆಣ್ಣೆಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40ರಷ್ಟು ಪ್ರತಿ ಹೆಕ್ಟೇರ್ ಗೆ ರೂ.11952 ರಿಂದ ರೂ.123483 ವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದೆ. 2022-23 ನೇ ಸಾಲಿನಲ್ಲಿ 812 ಹೆಕ್ಟೇರ್ ಪ್ರದೇಶಕ್ಕೆ 1328 ಫಲಾನುಭವಿಗಳಿಗೆ ರೂ.488 ಲಕ್ಷಗಳ ಸಹಾಯಧನ ನೀಡಲಾಗಿದೆ.<br>2. ಪರ್ಯಾಯ ಬೆಳೆಗಳ ನಿರ್ವಹಣೆ: ಮೊದಲನೇ ವರ್ಷದ ಆಯಾ ಬೆಳೆಗೆ ಅನುಗುಣವಾಗಿ ನಿರ್ವಹಣೆಯ ಶೇ.50 ರಷ್ಟು ಪ್ರತಿ ಹೆಕ್ಟೇರ್ ಗೆ ರೂ.2509 ರಿಂದ ರೂ.18017 ವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗುತ್ತಿದೆ. ರಾಜ್ಯದಲ್ಲಿ 2023-24 ನೇ ಸಾಲಿನಲ್ಲಿ 581.56 ಹೆಕ್ಟೇರ್ ನಿರ್ವಹಣೆಗೆ 586 ಫಲಾನುಭವಿಗಳಿಗೆ ರೂ. 64.55 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br>3. ಇಲಾಖಾ ವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು |

| | | |
|---|---|---|
| | | ಮೂಡಿಸಲಾಗಿದೆ.<br>4. ಈ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನ ಒದಗಿಸಿದ್ದು, ಸಂಶೋಧನೆ ಪ್ರಗತಿಯಲ್ಲಿರುತ್ತದೆ.<br>5. ಸದರಿ ರೋಗಗಳಿಂದ ಬಾಧಿತ ಅಡಿಕೆ ತೋಟಗಳ ಪುನಶ್ಚೇತನ MGNREGA ಯೋಜನೆಯ ಅಡಿಯಲ್ಲಿ ಮರುನಾಟಿ ಮಾಡಲು ರೂ.1,06,323 ರವರೆಗೆ ನೆರವು ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಈವರೆಗೆ 196.86 ಹೆಕ್ಟೇರ್ ಪ್ರದೇಶಕ್ಕೆ 1497 ಫಲಾನುಭವಿಗಳಿಗೆ ರೂ.382.86 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ. |
| ಈ) | ಎಲೆ ಚುಕ್ಕಿ ಮತ್ತು ಹಳದಿ ರೋಗ ಬಾಧೆಯಿಂದಾಗಿ ಸಂಕಷ್ಟಕ್ಕೀಡಾಗಿರುವ ಅಡಿಕೆ ಬೆಳೆಗಾರರಿಗೆ ಸರ್ಕಾರ ಇದುವರೆಗೆ ನೀಡಿರುವ ಪರಿಹಾರದ ವಿವರಗಳೇನು? | ರೋಗ ಮತ್ತು ಕೀಟದ ಬಾಧೆಯಿಂದ ಬೆಳೆ ಹಾನಿಗೆ ಪರಿಹಾರ ನೀಡಲು ತೋಟಗಾರಿಕೆ ಇಲಾಖೆಯಲ್ಲಿ ಯಾವುದೇ ಯೋಜನೆ ಇರುವುದಿಲ್ಲ. |

HORTI 56 HGM 2024

(ಎಸ್.ಎಸ್.ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ,
ತೋಟಗಾರಿಕೆ ಸಚಿವರು